# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 235 |
| ಸದಸ್ಯರ ಹೆಸರು | : | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಯಿಂದ ಆಯ್ಕೆಯಾದವರು) |
| ಉತ್ತರಿಸುವ ದಿನಾಂಕ | : | 17.02.2022 |
| ಉತ್ತರಿಸುವ ಸಚಿವರು | : | ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯ ಗಂಡೋರಿನಾಲಾ ಮತ್ತು ಮುಲ್ಲಾಮಾರಿ ಮೇಲ್ದಂಡೆ ಯೋಜನೆಗಳ ಆಧುನೀಕರಣ ಕಾಮಗಾರಿಗಾಗಿ ರೂ.160.60 ಕೋಟಿಗಳ ಅನುದಾನವನ್ನು ಒದಗಿಸಲಾಗಿದ್ದು, ಈ ಅನುದಾನದಲ್ಲಿ ಕೈಗೊಂಡ ಆಧುನೀಕರಣ ಕಾಮಗಾರಿಗಳು ಯಾವುವು; (ವಿವರ ನೀಡುವುದು) | ಕಲಬುರಗಿ ಜಿಲ್ಲೆಯ ಗಂಡೋರಿನಾಲಾ ಯೋಜನೆ ಕಾಲುವೆಗಳು ಮತ್ತು ಮೇಲ್ದಂಡೆ ಮುಲ್ಲಾಮಾರಿ ಯೋಜನೆಯ ಕಾಲುವೆಗಳ ಆಧುನೀಕರಣ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಶ್ರೀ ನಾಗಪ್ಪಾ ವಡ್ಡರ ಸಾ॥ ಲಿಂಗಸೂರ ಇವರಿಗೆ ದಿನಾಂಕ:26.03.2018 ರಂತೆ ಗುತ್ತಿಗೆ ಮೊತ್ತ ರೂ.176.39 ಕೋಟಿಗಳಿಗೆ ವಹಿಸಿಕೊಡಲಾಗಿದೆ. ಸದರಿ ಯೋಜನೆಯಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ.<br>1) ಗಂಡೋರಿನಾಲಾ ಯೋಜನೆಯ ಬಲದಂಡೆ ಕಾಲುವೆ ಕಿ.ಮೀ.0.00 ರಿಂದ 7.00 ಹಾಗೂ ಇದರಡಿ ಬರುವ 03 ವಿತರಣಾ ಕಾಲುವೆಗಳು, ಎಡದಂಡೆ ಕಾಲುವೆ ಕಿ.ಮೀ.0.00 ರಿಂದ 60.00 ಹಾಗೂ ಇದರಡಿ ಬರುವ 11 ವಿತರಣಾ ಕಾಲುವೆಗಳ ಆಧುನೀಕರಣ ಕಾಮಗಾರಿ.<br>2) ಮೇಲ್ದಂಡೆ ಮುಲ್ಲಾಮಾರಿ ಯೋಜನೆಯ ಬಲದಂಡೆ ಕಾಲುವೆ ಕಿ.ಮೀ.0.00 ರಿಂದ 42.00 ಹಾಗೂ ಇದರಡಿ ಬರುವ 45 ವಿತರಣಾ ಕಾಲುವೆಗಳು, ಎಡದಂಡೆ ಕಾಲುವೆ ಕಿ.ಮೀ.0.00 ರಿಂದ 28.00 ಹಾಗೂ ಇದರಡಿ ಬರುವ 27 ವಿತರಣಾ ಕಾಲುವೆಗಳ ಆಧುನೀಕರಣ ಕಾಮಗಾರಿ. |
| ಆ) | ಸದರಿ ಜಿಲ್ಲೆಯಲ್ಲಿ ಗಂಡೋರಿನಾಲಾ ಮತ್ತು ಮುಲ್ಲಾಮಾರಿ ಮೇಲ್ದಂಡೆ ಯೋಜನೆಯ ಕಾಲುವೆಗಳ ಆಧುನೀಕರಣ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆಯೇ, ಇಲ್ಲದಿದ್ದಲ್ಲಿ ಯಾವಾಗ ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು) | ಸದರಿ ಯೋಜನೆಗಳ ಕಾಮಗಾರಿಗಳು ಪೂರ್ಣಗೊಳ್ಳುವ ಹಂತದಲ್ಲಿದ್ದು, ಸದರಿ ಕಾಮಗಾರಿಗಳ ಸಂಬಂಧ ಇಲ್ಲಿಯವರೆಗೆ ರೂ.164.69 ಕೋಟಿಗಳ ಆರ್ಥಿಕ ಪ್ರಗತಿ ಸಾಧಿಸಲಾಗಿದ್ದು, ಕಾಮಗಾರಿಗಳನ್ನು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ. |
| ಇ) | ಪೂರ್ಣಗೊಳಿಸಿದ್ದಲ್ಲಿ, ಪೂರ್ಣಗೊಳಿಸಿದ ದಿನಾಂಕ, ವರ್ಷ ಸಹಿತ ವಿವರ ನೀಡುವುದು? | |

ಸಂಖ್ಯೆ: ಜಸಂಇ 17 ಎಂಎಲ್ಎ 2021

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು